## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 111 (129) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 17.08.2026 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಳೆದ 5 ವರ್ಷಗಳು ಹಾಗೂ ಅದಕ್ಕಿಂತ ಹೆಚ್ಚು ಅವಧಿಯಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆ, ಅನುಭವ ಹಾಗೂ ಅರ್ಹತೆಯನ್ನು ಪರಿಗಣಿಸಿ, ಈಗಾಗಲೇ ಘೋಷಿಸಿರುವ ಶಾಶ್ವತ ಅಧ್ಯಾಪಕರ ನೇಮಕಾತಿ ಪ್ರಕ್ರಿಯೆಯಲ್ಲಿ ಅವರಿಗೆ ವಯೋಮಿತಿ ಸಡಿಲಿಕೆ, ಸೇವಾ ಅನುಭವಕ್ಕೆ ಸೂಕ್ತ ತೂಕ (weightage), ವಿಶೇಷ ಆದ್ಯತೆ ಅಥವಾ ಒಮ್ಮೆಯ ವಿಶೇಷ ಅವಕಾಶ (One-Time Measure) ಕಲ್ಪಿಸಲು ಸರ್ಕಾರ ಅಗತ್ಯಕ್ರಮ ಕೈಗೊಳ್ಳುವುದೇ; | ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಪ್ರಸ್ತುತ ಎಐಸಿಟಿಇ ಮಾರ್ಗಸೂಚಿಗಳನ್ವಯ ನಿಗದಿಪಡಿಸಿರುವ ವಿದ್ಯಾರ್ಹತೆಯೊಂದಿಗೆ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಸ್ತುತ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರು/ಉಪನ್ಯಾಸಕರ ಹುದ್ದೆಗಳ ನೇಮಕಾತಿಗೆ ಅನುಮತಿ ನೀಡಲಾಗಿದೆ. ಈ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಅವರು ಸಲ್ಲಿಸಿದ ಸೇವೆಯನ್ನು ಆಧರಿಸಿ ಕೃಪಾಂಕ ನೀಡುವ ಪ್ರಸ್ತಾವನೆಯ ಪರಿಶೀಲನಾ ಪ್ರಕ್ರಿಯೆ ಜಾರಿಯಲ್ಲಿದೆ. |
| ಆ) | ಕಳೆದ ಹಲವು ವರ್ಷಗಳಿಂದ ಶಾಶ್ವತ ಉಪನ್ಯಾಸಕರಷ್ಟೇ ಬೋಧನೆ, ಪರೀಕ್ಷೆ, ಮೌಲ್ಯಮಾಪನ ಹಾಗೂ ಇತರೆ ಶೈಕ್ಷಣಿಕ ಜವಾಬ್ದಾರಿಗಳನ್ನು ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ, "ಸಮಾನ ಕೆಲಸಕ್ಕೆ ಸಮಾನ ವೇತನ" ತತ್ವದ ಅನ್ವಯ ಕನಿಷ್ಠ ಮೂಲ ವೇತನಕ್ಕೆ (Basic Pay) ಸಮನಾದ ಗೌರವಧನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; | • ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಅವರುಗಳ ವಿದ್ಯಾರ್ಹತೆ ಹಾಗೂ ಸೇವಾನುಭವಕ್ಕೆ ಅನುಗುಣವಾಗಿ ಸರ್ಕಾರದ ಆದೇಶ ಸಂಖ್ಯೆ:ಇಡಿ 122 ಡಿಟಿಇ 2023, ದಿನಾಂಕ:12.08.2024 ಹಾಗೂ ದಿನಾಂಕ:27.09.2024 ರಲ್ಲಿ ಗೌರವಧನ ಹಾಗೂ ಹೆಚ್ಚುವರಿ ಗೌರವ ಧನವನ್ನು ನಿಗದಿಪಡಿಸಲಾಗಿದೆ. ಸರ್ಕಾರದ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ.<br>• ಸರ್ಕಾರದ ಆದೇಶ ಸಂಖ್ಯೆ:ಇಡಿ 52 ಡಿಟಿಇ 2024, ದಿನಾಂಕ:04.03.2024ರಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಪಾಲಿಟೆಕ್ನಿಕ್‌ಗಳು |

| | | |
|---|---|---|
| | | ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ದಿನಾಂಕ:01.01.2024 ರಿಂದ ಜಾರಿಗೆ ಬರುವಂತೆ ವಾರ್ಷಿಕ ರೂ.50,000/- ರಂತೆ ಗರಿಷ್ಠ ರೂ.5,00,000/- ಲಕ್ಷ ಮೊತ್ತದ ಇಡಿಗಂಟು ಸೌಲಭ್ಯ ಹಾಗೂ ಆರೋಗ್ಯ ವಿಮೆ ಸೌಲಭ್ಯಗಳನ್ನು ಮಂಜೂರು ಮಾಡಲಾಗಿದೆ.<br>• ಸರ್ಕಾರದ ಆದೇಶ ಸಂಖ್ಯೆ:ಇಡಿ 166 ಡಿಸಿಇ 2026 (ಇ), ದಿನಾಂಕ:25.06.2026ರಲ್ಲಿ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಕಾಲೇಜು ಆಯ್ಕೆ ಮಾಡಿಕೊಂಡು ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಅತಿಥಿ ಉಪನ್ಯಾಸಕರುಗಳಿಗೆ ಗರಿಷ್ಠ 90 ದಿನಗಳ ವೇತನ ಸಹಿತ ಮಾತೃತ್ವ ರಜೆ (Maternity Leave) ಪಡೆಯಲು ಅವಕಾಶ ನೀಡಲಾಗಿರುತ್ತದೆ.<br>• ಅತಿಥಿ ಉಪನ್ಯಾಸಕರಿಗೆ ಮಾಸಿಕ ಒಂದು ಸಾಂದರ್ಭಿಕ ರಜೆಯ ಸೌಲಭ್ಯವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. |
| ಇ) | ಶಾಶ್ವತ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ, ಅತಿಥಿ ಉಪನ್ಯಾಸಕರಿಗೆ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ 11 ತಿಂಗಳ ನಿರಂತರ ನೇಮಕಾತಿ ಹಾಗೂ ಸೇವಾ ನಿರಂತರತೆ ಕಲ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ; | ಸರ್ಕಾರಿ ಇಂಜಿನಿಯರಿಂಗ್, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಪ್ರತೀ ಶೈಕ್ಷಣಿಕ ವರ್ಷದಲ್ಲಿ ಶೈಕ್ಷಣಿಕ ಕಾರ್ಯ ಚಟುವಟಿಕೆಗಳಿಗೆ ಸೀಮಿತವಾಗಿ 10 ತಿಂಗಳಿಗೆ ಮಾತ್ರ ನೇಮಕ ಮಾಡಲಾಗುತ್ತಿದೆ. |
| ಈ) | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ದೀರ್ಘಾವಧಿಯಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಹಿತಾಸಕ್ತಿಯನ್ನು ರಕ್ಷಿಸುವ ಉದ್ದೇಶದಿಂದ, ಅವರ ಸೇವೆಯನ್ನು ಪರಿಗಣಿಸಿ ಸೂಕ್ತ ನೀತಿ ರೂಪಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು? | ಅತಿಥಿ ಉಪನ್ಯಾಸಕರಿಗೆ ಕಾಲಕಾಲಕ್ಕೆ ಗೌರವ ಧನ ಹೆಚ್ಚಳ, ಆರೋಗ್ಯ ವಿಮೆ, ಇಡಿಗಂಟು ಸೌಲಭ್ಯ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಮುಂದುವರಿದು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರು/ಉಪನ್ಯಾಸಕರ ಹುದ್ದೆಗಳ ನೇಮಕಾತಿಯಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಅವರು ಸಲ್ಲಿಸಿದ ಸೇವೆಯನ್ನು ಆಧರಿಸಿ ಕೃಪಾಂಕ ನೀಡುವ ಪ್ರಸ್ತಾವನೆಯ ಪರಿಶೀಲನಾ ಪ್ರಕ್ರಿಯೆ ಜಾರಿಯಲ್ಲಿದೆ. |

ಸಂಖ್ಯೆ:ಇಡಿ 90 ಟಿಪಿಇ 2026

(ಬಸವರಾಜ ರಾಯರೆಡ್ಡಿ)
ಉನ್ನತ ಶಿಕ್ಷಣ ಸಚಿವರು